ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಬೋಧಕ ಹಾಗೂ ಬೋಧಕೇತರ ಹುದ್ದೆಗಳನ್ನು ತುಂಬುವ ಕುರಿತು

ಶ್ರೀಮತಿ ಎಸ್.ವೀಣಾಅಚ್ಚಯ್ಯ(ವಿಧಾನಸಭೆಯಿಂದಚುನಾಯಿತರಾದವರು):-

1481 (1747) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಡಗು ಜಿಲ್ಲೆಯ ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಬೋಧಕ ಹಾಗೂ ಬೋಧಕೇತರ ಹುದ್ದೆಗಳನ್ನು ತುಂಬದೇ ಇರುವುದರಿಂದ ಗುಣಮಟ್ಟದ ವೈದ್ಯಕೀಯ ಶಿಕ್ಷಣ ದೊರೆಯದೆ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಪ್ರಸ್ತುತ ಸದರಿ ಸಂಸ್ಥೆಗೆ ಮಂಜೂರಾಗಿರುವ ಬೋಧಕ ಹಾಗೂ ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ಮತ್ತು ಯಾವುವು;

(ಇ) ಮಂಜೂರಾಗಿರುವ ಎಲ್ಲಾ ಬೋಧಕ ಹಾಗೂ ಬೋಧಕೇತರ ಹುದ್ದೆಗಳನ್ನು ತುಂಬಲಾಗಿದೆಯೇ; ತುಂಬಲಾಗದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸದರಿ ಹುದ್ದೆಗಳನ್ನು ತುಂಬಲಾಗುವುದು ?